**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಯು.ಬಿ.ವೆಂಕಟೇಶ್ ರವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.**

**ಪ್ರಶ್ನೆ**

ರಾಜ್ಯದಲ್ಲಿ ಕೋವಿಡ್ ಅಲೆ ಆರಂಭವಾದ ನಂತರ ಕಳೆದ ಮೂರು ವರ್ಷಗಳಲ್ಲಿ ಕಾಣೆಯಾಗಿದ್ದ 47 ಸಾವಿರ ಜನರ ಪೈಕಿ ಮಕ್ಕಳು ಸೇರಿ 5510 ಜನ ಪೊಲೀಸ್ ತನಿಖೆಗೂ ಸಿಗದೆ ಕಣ್ಮರೆಯಾಗಿರುವ ಸಂಗತಿ ಕರ್ನಾಟಕ ಪೊಲೀಸ್ ವರದಿಯಲ್ಲಿ ಉಲ್ಲೇಖವಾಗಿರುವ ವಿಷಯ ವಿಜಯ ಕರ್ನಾಟಕ ಪ್ರತಿಕೆಯಲ್ಲಿ ವರದಿಯಾಗಿರುತ್ತದೆ.

ರಾಜ್ಯದಲ್ಲಿ 2020ರಲ್ಲಿ 13246 ನಾಪತ್ತೆ ಪ್ರಕರಣ ದಾಖಲಾಗಿದ್ದವು. ಅದರಲ್ಲಿ 13042 ಪ್ರಕರಣ ನಿಜ ಎಂದು ದೃಢಪಟ್ಟಿದೆ. ಆದರೆ ಕಾಣೆಯಾಗಿದ್ದ 686 ಜನರನ್ನು ಪತ್ತೆ ಮಾಡಲು ಆಗಿಲ್ಲ 331 ಜನರ ಪತ್ತೆ ಪ್ರಗತಿಯಲ್ಲಿದೆ. 2021ರಲ್ಲಿ ನಿಜ ಎಂದು ದೃಡಪಟ್ಟ 14961 ಪ್ರಕರಣಗಳ ಪೈಕಿ 311 ಜನ ಪತ್ತೆಯಾಗಿಲ್ಲ. 928 ಪ್ರಕರಣ ಇನ್ನು ತನಿಖೆ ಹಂತದಲ್ಲಿದೆ. 2022ರಲ್ಲಿ 17701 ಜನ ನಾಪತ್ತೆಯಾಗಿರುವ ಬಗ್ಗೆ ಪ್ರಕರಣ ದಾಖಲಾಗಿತ್ತು. ಅದರಲ್ಲಿ 17545 ಪ್ರಕರಣಗಳು ದೃಢಪಟ್ಟಿದ್ದು, 3741 ಪ್ರಕರಣ ಇನ್ನು ತನಿಖೆ ಹಂತದಲ್ಲಿಯೇ ಇರುವುದು ತಿಳಿದುಬಂದಿರುತ್ತದೆ.

ಪ್ರತಿ ವರ್ಷ ಸರಾಸರಿ ಎರಡೂವರೆ ಸಾವಿರದಷ್ಟು ಮಕ್ಕಳು ಕಾಣೆಯಾಗುತ್ತಿದ್ದರೂ ಸರ್ಕಾರ ಕಣ್ಮುಚ್ಚಿ ಕುಳಿತಿರುವುದು ಸರಿಯಲ್ಲ. ಈ ಬಗ್ಗೆ ಸರ್ಕಾರ ವಿಶೇಷ ಕಾರ್ಯಪಡೆಯನ್ನು ರಚಿಸಿ ಯಾವ ಕಾರಣಗಳಿಗಾಗಿ ಮಕ್ಕಳು ಕಾಣೆಯಾಗುತ್ತಿದ್ದಾರೆ. ಅದರ ಹಿಂದಿರುವವರು ಯಾರು ಎಂಬಿತ್ಯಾದಿ ವಿಷಯಗಳ ಬಗ್ಗೆ ತನಿಖೆ ನಡೆಸಲು ಕ್ರಮ ಕೈಗೊಳ್ಳಬೇಕೆಂದು ಮಾನ್ಯ ಗೃಹ ಸಚಿವರನ್ನು ಕೋರಿರುವ ಬಗ್ಗೆ.

**ಉತ್ತರ**

ರಾಜ್ಯದಲ್ಲಿ 2020ನೇ ಸಾಲಿನಿಂದ 2023ನೇ ಜನವರಿ 31ರ ವರೆಗೆ ಮಕ್ಕಳು ಸೇರಿದಂತೆ ಕಾಣೆಯಾದವರು, ಕಾಣೆಯಾದವರಲ್ಲಿ ಪತ್ತೆ ಹಚ್ಚಲಾದವರು ಮತ್ತು ಪತ್ತೆ ಹಚ್ಚಲು ಬಾಕಿ ಇರುವವರ ಅಂಕಿ-ಅಂಶಗಳು ಈ ಕೆಳಕಂಡಂತಿದೆ.

**ಗಂಡಸರು ಮತ್ತು ಮಹಿಳೆಯರ ಕಾಣೆ ಪ್ರಕರಣಗಳು**

| ವರ್ಷ | ಗಂಡಸರು | | | ಮಹಿಳೆಯರು | | |
|---|---|---|---|---|---|---|
| | ವರದಿ | ಪತ್ತೆ | ಪತ್ತೆ ಹಚ್ಚಲು ಬಾಕಿ | ವರದಿ | ಪತ್ತೆ | ಪತ್ತೆ ಹಚ್ಚಲು ಬಾಕಿ |
| 2020 | 4273 | 3503 | 770 | 8948 | 8684 | 264 |
| 2021 | 5056 | 4172 | 884 | 10081 | 9735 | 346 |
| 2022 | 6468 | 4833 | 1635 | 11215 | 10186 | 1029 |
| 2023 | 499 | 172 | 327 | 950 | 421 | 529 |

ಗಂಡು ಮತ್ತು ಹೆಣ್ಣು ಮಕ್ಕಳು (18 ವರ್ಷದೊಳಗಿನವರು)

| ವರ್ಷ | ಗಂಡು ಮಕ್ಕಳು | | | ಹೆಣ್ಣು ಮಕ್ಕಳು | | |
|---|---|---|---|---|---|---|
| | ವರದಿ | ಪತ್ತೆ | ಪತ್ತೆ ಹಚ್ಚಲು ಬಾಕಿ | ವರದಿ | ಪತ್ತೆ | ಪತ್ತೆ ಹಚ್ಚಲು ಬಾಕಿ |
| 2020 | 432 | 410 | 22 | 1151 | 1111 | 40 |
| 2021 | 496 | 463 | 33 | 1653 | 1551 | 102 |
| 2022 | 748 | 611 | 137 | 1897 | 1443 | 454 |
| 2023 | 69 | 9 | 60 | 184 | 12 | 172 |

18 ವರ್ಷ ಮೇಲ್ಪಟ್ಟವರು ಕಾಣೆಯಾದವರು ಸಾಲದ ಹೊರೆ, ಮಾನಸಿಕ ಹಿಂಸೆ, ಕೌಟುಂಬಿಕ ಕಲಹ, ಮತಿಭ್ರಮಣೆ ಹಾಗೂ ಇತರೆ ಕಾರಣಗಳಿಂದ ಮನೆ ಬಿಟ್ಟು ಹೋದವರು ಕುರಿತು ದಾಖಲಾಗುವ ಪ್ರಕರಣಗಳಲ್ಲಿ ವಾಪಸ್ಸಾದ ನಂತರ ಪೊಲೀಸ್ ಠಾಣೆಗಳಿಗೆ ಮಾಹಿತಿ ನೀಡದೆ ಇರುವುದರಿಂದಲೂ ನಾಪತ್ತೆ ಪ್ರಕರಣಗಳು ಹೆಚ್ಚಾಗಿರುತ್ತದೆ.

ಕೆಲವು ಪ್ರೀತಿ/ ಪ್ರೇಮ ಪ್ರರಕಣಗಳಲ್ಲಿ ಮನೆ ಬಿಟ್ಟು ಹೋದವರಲ್ಲಿ ಪ್ರಕರಣಗಳು ದಾಖಲಿಸಿದ ನಂತರ ಸಂಧಾನದ ಮಾಡಿಕೊಂಡ ಪ್ರಕರಣಗಳಲ್ಲಿ ಪೊಲೀಸ್ ಠಾಣೆಗಳಿಗೆ ಮಾಹಿತಿ ನೀಡದೆ ಇರುವುದರಿಂದ ಪ್ರಕರಣಗಳು ಬಾಕಿ ಇರುತ್ತವೆ.

**ಹೆಣ್ಣು ಮತ್ತು ಗಂಡು ಮಕ್ಕಳು ನಾಪತ್ತೆಯಾಗಲು ಈ ಕೆಳಕಂಡ ಅಂಶಗಳು ಪ್ರಮುಖ ಕಾರಣಗಳಾಗಿರುತ್ತದೆ.**

- ಮನೆಯಲ್ಲಿ ಅತಿಯಾದ ಶಿಸ್ತು, ಪೋಷಕರ ಕಿರುಕುಳದಿಂದ ಮಕ್ಕಳು ಮನೆ ಬಿಡುವುದು.
- ಪ್ರೇಮ/ಪ್ರೀತಿ ಪ್ರಕರಣಗಳಿಂದ ಹದಿಹರೆಯದವರು ಮನೆ ತೊರೆದು ಕಾಣೆಯಾಗುವುದು.
- ಟಿವಿ/ಸಿನಿಮಾ/ಮೊಬೈಲ್ ಮುಂತಾದ ಆಧುನಿಕ ಮಾಧ್ಯಮಗಳ ಹವ್ಯಾಸಗಳಿಂದ ಪ್ರಭಾವಿತರಾಗುವುದರಿಂದ ಅತೃಪ್ತಿಗೊಂಡ ಕಾರಣಕ್ಕಾಗಿ.
- ಶೈಕ್ಷಣಿಕ ವೈಫಲ್ಯದ ಕಾರಣಗಳಿಂದಾಗಿ.
- ಅಕ್ರಮ ಮಕ್ಕಳ ಕಳ್ಳಸಾಗಣಿಕೆ ಕಾರಣಗಳಿಂದಾಗಿ.

ಕಳ್ಳಸಾಗಾಣಿಕೆ ಪ್ರಕರಣಗಳು ಸೇರಿದಂತೆ ನಾಪತ್ತೆ ಪ್ರಕರಣಗಳಲ್ಲಿ ಆರೋಪಿಗಳನ್ನು ಬಂಧಿಸಿ, ಅವರ ಮೇಲೆ ಕಾನೂನು ರೀತ್ಯಾ ಪ್ರಕರಣಗಳನ್ನು ದಾಖಲಿಸಿ, ಐಪಿಸಿ ಕಲಂಗಳಡಿ ಆರೋಪಿಗಳ ವಿರುದ್ಧ ಮಾನ್ಯ ನ್ಯಾಯಾಲಯಗಳಿಗೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಲಾಗುತ್ತದೆ.

**ನಾಪತ್ತೆಯಾದವರನ್ನು ಪತ್ತೆ ಹಚ್ಚಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.**

- ಕಾಣೆಯಾದ ಪ್ರಕರಣಗಳ ಪೈಕಿ 60 ದಿನದೊಳಗೆ ಪತ್ತೆಯಾಗದ ಪ್ರಕರಣಗಳನ್ನು ಪರಿಣಾಮಕಾರಿ ತನಿಖೆಗಾಗಿ ವಿಶೇಷ ಘಟಕವಾದ ಎಹೆಚ್‌ಟಿಯು (Anti Human Trafficking Unit) ಘಟಕಗಳಿಗೆ ವರ್ಗಾವಣೆ ಮಾಡುವುದು.
- Missing Gazettee ನೀಡುವುದು, ಸಂಬಂಧಿಕರು ಮತ್ತು ಸ್ನೇಹಿತರಲ್ಲಿ ವಿಚಾರಿಸುವುದು, ಅಪರಿಚಿತ ಶವಗಳೊಂದಿಗೆ (Unidentified Death Cases) ತಾಳೆ ಮಾಡುವುದು.
- ಸಾಮಾಜಿಕ ಜಾಲತಾಣಗಳಲ್ಲಿ ಪ್ರಸಾರ ಮಾಡುವುದು.
- ಅನಾಥಾಶ್ರಮಗಳಲ್ಲಿ, ಆಶ್ರಮಗಳಲ್ಲಿ, ಆಧ್ಯಾತ್ಮಿಕ ಸ್ಥಳಗಳಲ್ಲಿ ಮತ್ತು ಬಾಲಮಂದಿರಗಳಲ್ಲಿ ಹುಡುಕುವುದು.
- ಲುಕ್ ಔಟ್ ನೋಟೀಸ್ ನೀಡುವುದು, ಅಕ್ಕ-ಪಕ್ಕದ ಜಿಲ್ಲೆಗಳಲ್ಲಿ ಕಾಣೆಯಾದ ಮಕ್ಕಳ ಕುರಿತು ಹುಡುಕಾಟ ನಡೆಸುವುದು.
- ದಕ್ಷ ಅಧಿಕಾರಿಗಳ ತಂಡವನ್ನು ನಿರ್ಮಿಸಿ ಎಲ್ಲಾ ಕಡೆ ಹುಡುಕಾಟ ನಡೆಸುವುದು, ಅಕ್ಕ-ಪಕ್ಕದ ಜಿಲ್ಲೆಗಳ ಪೊಲೀಸ್ ಠಾಣೆಗಳಲ್ಲಿ ದಾಖಲಾದ ಅಪರಿಚಿತ ಶವಗಳ UDR ಪ್ರಕರಣಗಳನ್ನು ಪರಿಶೀಲಿಸುವುದು, ಜಿಲ್ಲಾ ಅಪರಾಧ ದಾಖಲಾತಿ ವಿಭಾಗಗಳಲ್ಲಿನ ವರದಿಗಳನ್ನು ಪರಿಶೀಲಿಸುವುದು, ಪೇಪರ್ ಮತ್ತು ದೂರವಾಣಿಯಲ್ಲಿ ಕಾಣೆಯಾದ ಮಕ್ಕಳ ಭಾವಚಿತ್ರವನ್ನು ಪ್ರಸಾರ ಮಾಡುವುದು.

**ಮಾನವ ಕಳ್ಳ ಸಾಗಾಣಿಕೆಯನ್ನು ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.**

- ರಾಜ್ಯದಲ್ಲಿ ಮಾನವ ಕಳ್ಳಸಾಗಾಣಿಕೆಯನ್ನು ತಡೆಗಟ್ಟಲು ಹಾಗೂ ನಿಯಂತ್ರಿಸಲು ಸರ್ಕಾರವು ನಿರ್ಭಯ ನಿಧಿ ಅಡಿಯಲ್ಲಿ 35 ಮಾನವ ಕಳ್ಳ ಸಾಗಾಣಿಕೆ ನಿಷೇಧ ಘಟಕಗಳನ್ನು ಸ್ಥಾಪಿಸಲಾಗಿರುತ್ತದೆ.
- ಸದರಿ ಅನುಧಾನದಲ್ಲಿ ರಾಜ್ಯದ ಎಲ್ಲಾ ನಗರ/ಜಿಲ್ಲೆಗಳಲ್ಲಿ ಮಾನವ ಕಳ್ಳ ಸಾಗಾಣಿಕೆ ನಿಷೇಧ ಘಟಕವನ್ನು ಸ್ಥಾಪಿಸಿದ್ದು, ಸದರಿ ಘಟಕಗಳು ಮಹಿಳಾ ಪೊಲೀಸ್ ಠಾಣೆಗಳ ಠಾಣಾಧಿಕಾರಿಗಳು ಉಸ್ತುವಾರಿಯಲ್ಲಿ ಕಾರ್ಯನಿರ್ವಹಿಸುತ್ತಿದೆ.
- ಪ್ರತಿ ಮಾನವ ಕಳ್ಳಸಾಗಾಣಿಕೆ ಘಟಕಗಳಿಗೆ ಹಿರಿಯ ಮತ್ತು ಕಿರಿಯ ಮಕ್ಕಳ ಕಲ್ಯಾಣಾಧಿಕಾರಿಗಳನ್ನು ನಿಯೋಜಿಸಿ, ಅವರುಗಳಿಗೆ ತರಬೇತಿ ನೀಡಲಾಗಿರುತ್ತದೆ.
- ಮಾನವ ಸಾಗಣಿಕೆ ಮಾಡುವವರ ವಿರುದ್ಧ ಬಾತ್ಮಿ ಸಂಗ್ರಹಿಸಿ ತಪ್ಪಿತಸ್ಥರ ವಿರುದ್ಧ ಕಲಂ.370, 370[ಎ] ಐಪಿಸಿ ಮತ್ತು ಇಮ್ಮೋರಲ್ ಟ್ರಾಫಿಕಿಂಗ್ ಪ್ರಿವೆನ್ಷನ್ ಆಕ್ಟ್ (ಐ.ಟಿ.ಪಿ.ಎ) ಹಾಗೂ ಸಂಬಂಧಪಟ್ಟ ಇತರೆ ಕಾಯ್ದೆ ಮತ್ತು ಕಲಂ ರೀತ್ಯಾ ಪ್ರಕರಣಗಳನ್ನು ದಾಖಲಿಸಿ, ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುತ್ತಿದೆ.
- ಮಾನವ ಕಳ್ಳಸಾಗಾಣಿಕೆಯ ಪ್ರಕರಣಗಳ ತನಿಖೆಯನ್ನು ಸಮರ್ಥವಾಗಿ ನಿರ್ವಹಿಸಲು ತನಿಖಾಧಿಕಾರಿಗಳಿಗಾಗಿ ನಿರ್ದಿಷ್ಟ ಕಾರ್ಯವಿಧಾನವನ್ನು ಸಿದ್ಧಪಡಿಸಿ, ಸ್ಥಾನಿ ಆದೇಶದ ಮೂಲಕ ರಾಜ್ಯ ಎಲ್ಲಾ ಘಟಕಾಧಿಕಾರಿಗಳಿಗೆ ಕಳುಹಿಸಿಕೊಡಲಾಗಿದೆ.

- ಅಪರಿಚಿತ ವ್ಯಕ್ತಿಗಳ ಬಳಿ ಸಂಪರ್ಕ ಇಟ್ಟುಕೊಳ್ಳದಂತೆ, ಆಸೆ ಆಮಿಷಗಳನ್ನು ಒಡ್ಡುವ ಆಸಾಮಿಗಳ ಬಗ್ಗೆ ಮಹಿಳೆಯರಿಗೆ & ಮಕ್ಕಳಿಗೆ ಹಾಗೂ ಗ್ರಾಮಗಳಲ್ಲಿ ಸೂಕ್ತ ತಿಳುವಳಿಕೆಗಳನ್ನು ನೀಡಲಾಗಿರುತ್ತದೆ.
- ಅಪರಾಧ ಚಟುವಟಿಕೆಗಳಲ್ಲಿ ಹಾಗೂ ಮಕ್ಕಳ ಭಿಕ್ಷಾಟನೆಯಲ್ಲಿ ತೊಡಗಿಸಿರುವಂತಹ ಅಪರಿಚಿತ ವ್ಯಕ್ತಿಗಳು ಕಂಡು ಬಂದಲ್ಲಿ ಅಂತಹವರ ಕುರಿತು ಠಾಣೆಗೆ ಮಾಹಿತಿ ನೀಡುವಂತೆ ಸೂಚಿಸಲಾಗಿರುತ್ತದೆ.
- ಮಹಿಳೆ ಮತ್ತು ಮಕ್ಕಳ ಸುರಕ್ಷತೆಗಾಗಿ ವಿವಿಧ ಹೆಸರುಗಳಡಿಯಲ್ಲಿ ವಿಶೇಷ ಪಡೆಗಳನ್ನು ರಚಿಸಿದ್ದು, ಸದರಿ ಪಡೆಯು ನಗರದ ಮತ್ತು ಜಿಲ್ಲಾ ವ್ಯಾಪ್ತಿಯ ಶಾಲಾ- ಕಾಲೇಜು, ಪಾರ್ಕ್‌ಗಳು, ಹಾಸ್ಟೆಲ್, ಪಿಜಿ, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಮತ್ತು ಇತರೆ ಹೆಚ್ಚಾಗಿ ಮಹಿಳೆಯರು ಮತ್ತು ಮಕ್ಕಳು ಓಡಾಡುವ ಸ್ಥಳಗಳಲ್ಲಿ ಪ್ರತಿದಿನ ಗಸ್ತು ಮಾಡುತ್ತಾ ಅರಿವು ಮೂಡಿಸಲಾಗುತ್ತಿದೆ.
- ಬಸ್ ನಿಲ್ದಾಣ, ರೈಲು ನಿಲ್ದಾಣ, ವಿಮಾಣ ನಿಲ್ದಾಣ ಮತ್ತು ಜನನಿಬಿಡ ಸ್ಥಳಗಳಲ್ಲಿ ಹಾಗೂ ಪ್ರಮುಖ ಸ್ಥಳಗಳನ್ನು ಗುರುತಿಸಿ ಸಿಸಿ ಟಿ.ವಿ ಕ್ಯಾಮರಾಗಳನ್ನು ಅಳವಡಿಸಿದ್ದು ಅವುಗಳ ಸಹಾಯದಿಂದ ಮಹಿಳೆಯರ ಮತ್ತು ಮಕ್ಕಳ ಸಾಗಾಟ ಮಾಡುವವರ ಮೇಲೆ ನಿಗಾವಹಿಸಲಾಗಿದೆ.
- ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿನ ಬೀಟ್ ಸಿಬ್ಬಂದಿಗಳ ಮೂಲಕ ಹಾಗೂ ಬೀಟ್‌ಗ್ರೂಪ್ ಸದಸ್ಯರ ಮೂಲಕ ಮಾನವ ಕಳ್ಳಸಾಗಾಣಿಕೆ ಬಗ್ಗೆ ಸಂಬಂಧಿಸಿದಂತೆ ಮುಂಚಿತವಾಗಿ ಮಾಹಿತಿ ಸಂಗ್ರಹಿಸಿ ಸೂಕ್ತ ಮುಂಜಾಗ್ರತಾ ಕ್ರಮ ಕೈಕೊಳ್ಳುವ ವ್ಯವಸ್ಥೆ ಮಾಡಲಾಗಿದೆ
- ಚಾಲ್ತಿಯಲ್ಲಿರುವ ಸಾಮಾಜಿಕ ಜಾಲತಾಣಗಳಾದ ಬ್ಲಾಗ್, ಟ್ವಿಟರ್, ಫೇಸ್ ಬುಕ್, ಪೊಲೀಸ್ ವೆಬ್ ಸೈಟ್ ಹಾಗೂ ಇತರೆ ಜಾಲತಾಣಗಳ ಮೂಲಕ ಮಾನವ ಕಳ್ಳ ಸಾಗಾಣೆ ಬಗ್ಗೆ ಜಾಗೃತಿ ಮೂಡಿಸುವ ಸಂದೇಶವನ್ನು ಪ್ರಕಟಿಸಲಾಗಿದೆ.

**ಸಂಖ್ಯೆ: ಹೆಚ್‌ಡಿ 10 ಪಿಸಿಕ್ಯೂ 2023**

(ಆರಗ ಜ್ಞಾನೇಂದ್ರ)
ಗೃಹ ಸಚಿವರು